## ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ

### ಶ್ರೀ ಶಾಂತಾರಾಮ ಸಿದ್ದಿ, ಮಾನ್ಯ ಶಾಸಕರು, ಕರ್ನಾಟಕ ವಿಧಾನ ಪರಿಷತ್ತು ರವರು ಗಮನ ಸೆಳೆಯುವ ಸೂಚನೆಗೆ (ನಿಯಮ 72) ಉತ್ತರ :-

**ವಿಷಯ: -**

ಉತ್ತರ ಕನ್ನಡ ಜಿಲ್ಲೆಯ ಬುಡಕಟ್ಟು ಸಿದ್ದಿ ಜನಾಂಗವು 2003ನೇ ಇಸವಿಯಲ್ಲಿ ಪರಿಶಿಷ್ಟ ಪಂಗಡಕ್ಕೆ ಸೇರ್ಪಡೆಗೊಂಡಿದ್ದರೂ ಕೂಡ ಶಿಕ್ಷಣ, ಸಂಸ್ಕೃತ ಉದ್ಯೋಗ, ವಸತಿ, ಸಾಗುವಳಿ ಮತ್ತು ಪರಿಶಿಷ್ಟ ಪಂಗಡಕ್ಕಾಗಿ ಇರುವ ನಿಗಮದಲ್ಲಿ ಸಿದ್ದಿ ಸಮುದಾಯದ ಹೆಸರು ಇಲ್ಲದಿರುವುದು ಮುಂತಾದ ಅನೇಕ ಸಮಸ್ಯೆಗಳನ್ನು ಎದುರಿಸುತ್ತಿದೆ.

ಹೀಗಾಗಿ ಉತ್ತರ ಕನ್ನಡ ಜಿಲ್ಲೆಯ ಬುಡಕಟ್ಟು ಸಿದ್ದಿ ಜನಾಂಗ ಎದುರಿಸುತ್ತಿರುವ ಅನೇಕ ಸಮಸ್ಯೆಗಳ ಕುರಿತು ಮಾನ್ಯ ಪರಿಶಿಷ್ಟ ವರ್ಗಗಳ ಕಲ್ಯಾಣ ಸಚಿವರ ಮತ್ತು ಸದನದ ಗಮನವನ್ನು ಸೆಳೆಯಲು ಬಯಸುತ್ತೇನೆ.

**ಉತ್ತರ:-**

ಸರ್ಕಾರ ಆದೇಶ ಸಂಖ್ಯೆ:ಸಕಇ 177 ಎಸ್ ಎ ಟಿ 99, ದಿನಾಂಕ:15.06.2003 ರನ್ವಯ ಪ್ರವರ್ಗ-1 ದರಲ್ಲಿದ್ದ ಸಿದ್ದಿ ಜನಾಂಗವನ್ನು ಉತ್ತರ ಕನ್ನಡ ಜಿಲ್ಲೆಗೆ ಮಾತ್ರ ಅನ್ವಯಿಸುವಂತೆ ಕ್ರ.ಸಂಖ್ಯೆ-50 ರಲ್ಲಿ ಪರಿಶಿಷ್ಟ ಪಂಗಡಗಳ ಜಾತಿಗೆ ಸೇರ್ಪಡೆಗೊಳಿಸಲಾಗಿದೆ.

ಸರ್ಕಾರದ ಆದೇಶ ಸಂಖ್ಯೆ: ಸಕಇ 90 ಎಸ್ ಡಿಸಿ 2021, ದಿನಾಂಕ:17.12.2022 ರಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ವರ್ಗಗಳ ಅಲೆಮಾರಿ ಅರೆಅಲೆಮಾರಿ ಸೂಕ್ಷ್ಮ ಮತ್ತು ಅತಿ ಸೂಕ್ಷ್ಮ ಸಮುದಾಯಗಳಿಗೆ ಸಾಮಾಜಿಕ, ಶೈಕ್ಷಣಿಕ ಮತ್ತು ಆರ್ಥಿಕ ಸವಲತ್ತುಗಳನ್ನು ರಾಜ್ಯ ಸರ್ಕಾರದಿಂದ ಒದಗಿಸಲು ಹಾಗೂ ಕೇಂದ್ರ ಸರ್ಕಾರದ The Development and Wefare Board for de-notified, Nomadic and Semi Nomadic Communities ಮಾದರಿಯಲ್ಲಿ ಸಾಮಾಜಿಕ, ಶೈಕ್ಷಣಿಕ ಮತ್ತು ಆರ್ಥಿಕ ಅಭಿವೃದ್ಧಿ ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸಲು ಸಾಧ್ಯವಾಗುವಂತೆ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಅಲೆಮಾರಿ ಅಭಿವೃದ್ಧಿ ನಿಗಮವನ್ನು ಪ್ರತ್ಯೇಕವಾಗಿ ಸ್ಥಾಪಿಸಿ ಆದೇಶಿಸಿದೆ.
ಸರ್ಕಾರದ ಪತ್ರ ಸಂಖ್ಯೆ: ಸಕಇ 95 ಎಸ್ ಟಿಸಿ 2022, ದಿನಾಂಕ:17.02.2023 ರಲ್ಲಿ 2022-23 ರಲ್ಲಿ ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಲೆಮಾರಿ, ಅರ ಅಲೆಮಾರಿ, ಸೂಕ್ಷ್ಮ ಮತ್ತು ಅತಿಸೂಕ್ಷ್ಮ ಸಮುದಾಯಗಳ ಅಭಿವೃದ್ಧಿ ನಿಗಮವನ್ನು ಸ್ಥಾಪಿಸಲಾಗಿದೆ. ಆದ್ದರಿಂದ, 'ಕರ್ನಾಟಕ ಆದಿವಾಸಿ ಅಭಿವೃದ್ಧಿ ಮಂಡಳಿ' ಯನ್ನು ಅಲೆಮಾರಿ ನಿಗಮದಲ್ಲಿ ವಿಲೀನಗೊಳಿಸಿ ಅಲೆಮಾರಿ ಇತ್ಯಾಧಿ ಜಾತಿ ಪಟ್ಟಿಯಲ್ಲಿ ಇಲ್ಲದೇ ಇರುವ ಕಡಿಮ ಜನಸಂಖ್ಯೆ ಇರುವ 25 ಸಮುದಾಯಗಳಲ್ಲಿ ಸಿದ್ದಿ ಸಮುದಾಯ ಸೇರ್ಪಡೆಗೊಳಿಸಲಾಗಿದೆ.

2022-23ನೇ ಸಾಲಿನಲ್ಲಿ ಪರಿಶಿಷ್ಟ ಪಂಗಡದ ಅಲೆಮಾರಿ, ಅರ ಅಲೆಮಾರಿ, ಸೂಕ್ಷ್ಮ ಮತ್ತು ಅತಿಸೂಕ್ಷ್ಮ ಸಮುದಾಯಗಳ ಆರ್ಥಿಕಾಭಿವೃದ್ಧಿ ಕಾರ್ಯಕ್ರಮಗಳಿಗೆ ಸಂಬಂಧಿಸಿದ ಅನುಧಾನ ರೂ.2474.00 ಲಕ್ಷಗಳನ್ನು ದಿನಾಂಕ:30.05.2023ರಂದು ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಅಲೆಮಾರಿ ಅಭಿವೃದ್ಧಿ ನಿಗಮಕ್ಕೆ ವರ್ಗಾಹಿಸಲಾಗಿದೆ.

2023-24ನೇ ಸಾಲಿನಿಂದ ಸಿದ್ದಿ ಸಮುದಾಯ ಒಳಗೊಂಡಂತೆ ಪರಿಶಿಷ್ಟ ಪಂಗಡದ ಪರಿಶಿಷ್ಟ ಪಂಗಡದ ಅಲೆಮಾರಿ, ಅರ ಅಲೆಮಾರಿ, ಸೂಕ್ಷ್ಮ ಮತ್ತು ಅತಿಸೂಕ್ಷ್ಮ ಸಮುದಾಯಗಳ ಆರ್ಥಿಕಾಭಿವೃದ್ಧಿ ಕಾರ್ಯಕ್ರಮಗಳಿಗೆ ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಅಲೆಮಾರಿ ಅಭಿವೃದ್ಧಿ ನಿಗಮವು ಸೇವಾ ಸಿಂಧು ಪೋರ್ಟಲ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

..2

2022-23ನೇ ಸಾಲಿನಲ್ಲಿ ಪರಿಶಿಷ್ಟ ಪಂಗಡದ ಅಲೆಮಾರಿ, ಅರೆ ಅಲೆಮಾರಿ, ಸೂಕ್ಷ್ಮ ಮತ್ತು ಅತಿಸೂಕ್ಷ್ಮ ಸಮುದಾಯಗಳ ಆರ್ಥಿಕಾಭಿವೃದ್ಧಿ ಕಾರ್ಯಕ್ರಮಗಳಿಗೆ ಸಂಬಂಧಿಸಿದ ಅನುದಾನ ರೂ.2474.00 ಲಕ್ಷಗಳನ್ನು ದಿನಾಂಕ:30.05.2023ರಂದು ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಅಲೆಮಾರಿ ಅಭಿವೃದ್ಧಿ ನಿಗಮಕ್ಕೆ ವರ್ಗಾಯಿಸಲಾಗಿದೆ.

2023-24ನೇ ಸಾಲಿನಿಂದ ಸಿದ್ದಿ ಸಮುದಾಯ ಒಳಗೊಂಡಂತೆ ಪರಿಶಿಷ್ಟ ಪಂಗಡದ ಅಲೆಮಾರಿ, ಅರೆ ಅಲೆಮಾರಿ, ಸೂಕ್ಷ್ಮ ಮತ್ತು ಅತಿಸೂಕ್ಷ್ಮ ಸಮುದಾಯಗಳ ಆರ್ಥಿಕಾಭಿವೃದ್ಧಿ ಕಾರ್ಯಕ್ರಮಗಳಿಗೆ ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಅಲೆಮಾರಿ ಅಭಿವೃದ್ಧಿ ನಿಗಮವು ಸೇವಾ ಸಿಂಧು ಪೋರ್ಟಲ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಪರಿಶಿಷ್ಟ ಪಂಗಡಕ್ಕೆ ಸೇರಿದ ಎಲ್ಲಾ ವಿದ್ಯಾರ್ಥಿಗಳಿಗೆ ಶೈಕ್ಷಣಿಕವಾಗಿ ಉತ್ತೇಜನ ನೀಡಲು 2018-19ನೇ ಸಾಲಿನಿಂದ ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ ಕಾರ್ಯಕ್ರಮವನ್ನು ಹಾಗೂ 2019-20ನೇ ಸಾಲಿನಿಂದ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮವನ್ನು ಇ-ಆಡಳಿತ ಇಲಾಖೆಯವರು ಅಭಿವೃದ್ಧಿಪಡಿಸಿರುವ ರಾಜ್ಯ ವಿದ್ಯಾರ್ಥಿವೇತನ ಪೋರ್ಟಲ್ ಮೂಲಕ ಅನುಷ್ಠಾನ ಮಾಡಲಾಗುತ್ತಿದ್ದು, ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಆನ್‌ಲೈನ್ ಮೂಲಕ ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನಕ್ಕಾಗಿ https://ssp.karnataka.gov.in/ssp2324/homepage.aspx ಹಾಗೂ ಮೆಟ್ರಿಕ್ ನಂತರ ವಿದ್ಯಾರ್ಥಿವೇತನಕ್ಕಾಗಿ https://ssp.postmatric.karnataka.gov.in ವೆಬ್‌ಸೈಟ್‌ನಲ್ಲಿ ಅರ್ಜಿ ಸಲ್ಲಿಸಬಹುದಾಗಿರುತ್ತದೆ. ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳಿಗೆ ಡಿಬಿಟಿ ಪೋರ್ಟಲ್ ಮೂಲಕ ಆಧಾರ್ ಜೋಡಿತ ಬ್ಯಾಂಕ್ ಖಾತೆಗೆ ವಿದ್ಯಾರ್ಥಿವೇತನದ ಮೊತ್ತವನ್ನು ನೇರವಾಗಿ ವಿದ್ಯಾರ್ಥಿಗಳ ಬ್ಯಾಂಕ್ ಖಾತೆಗೆ ಜಮೆ ಮಾಡಲಾಗುತ್ತಿದೆ.

2023-24ನೇ ಸಾಲಿಗೆ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳು ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನಕ್ಕಾಗಿ ಆನ್‌ಲೈನ್ ಮೂಲಕ 413305 ಅರ್ಜಿಗಳನ್ನು ಸಲ್ಲಿಸಿದ್ದು, ಈ ಪೈಕಿ 241544 ಅರ್ಜಿಗಳಿಗೆ ರೂ.3907.00 ಲಕ್ಷಗಳನ್ನು ಮಂಜೂರಾತಿ ನೀಡಲಾಗಿರುತ್ತದೆ. ಅದರಂತೆ, ಮೆಟ್ರಿಕ್ ನಂತರದ ವಿದ್ಯಾರ್ಥಿವೇತನಕ್ಕಾಗಿ 109366 ಅರ್ಜಿಗಳು ಆನ್‌ಲೈನ್ ಮೂಲಕ ಸ್ವೀಕೃತಿಯಾಗಿದ್ದು, ಈ ಪೈಕಿ 94912 ಅರ್ಜಿಗಳಿಗೆ ಅನುಮೋದನೆ ನೀಡಿ ಮಂಜೂರಾತಿ ನೀಡಲು ಕ್ರಮವಹಿಸಲಾಗುತ್ತಿದೆ.

(ಬಿ. ನಾಗೇಂದ್ರ)
ಯುವಜನ ಸೇವಾ ಮತ್ತು ಕ್ರೀಡಾ ಇಲಾಖೆ ಹಾಗೂ
ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ